## ಯೋಜನಾ ಉಸ್ತುವಾರಿ ಮತ್ತು ಮಾಹಿತಿ ವಿಭಾಗ (ಪಿಎಂಐ ವಿಭಾಗ)

ರಾಜ್ಯಮಟ್ಟದಲ್ಲಿ ವಿವಿಧ ಸರ್ಕಾರಿ ಯೋಜನೆಗಳು ಮತ್ತು ಕಾರ್ಯಕ್ರಮಗಳನ್ನು ಪಿಎಂಐ ವಿಭಾಗದ ಮೂಲಕ ಕೆಳಕಂಡ ಕಾರ್ಯವಿಧಾನದ ಮುಖೇನ ಉಸ್ತುವಾರಿ ಮಾಡುವುದು ಪ್ರಮುಖ ಕಾರ್ಯವಾಗಿದೆ.

ಅ. ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ (ಇಪ್ಪತ್ತು ಅಂಶಗಳ ಕಾರ್ಯಕ್ರಮವೂ ಸೇರಿದಂತೆ) ಪರಿಶೀಲನೆ:

ಪ್ರತಿ ತಿಂಗಳೂ ಸಾಮಾನ್ಯವಾಗಿ ಮೊದಲೇ ಗೊತ್ತುಪಡಿಸಿರುವ ಮಾಸಿಕ ಗುರಿಗಳನ್ವಯ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿಯನ್ನು ಪರಿಶೀಲಿಸಲಾಗುತ್ತಿದೆ. ಈ ವಿಭಾಗವು ರಾಜ್ಯ ಮಟ್ಟದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳನ್ನೊಳಗೊಂಡ ಪ್ರಗತಿ ಪರಿಶೀಲನಾ ಸಭೆಗಳನ್ನು ಪ್ರತಿ ತಿಂಗಳಿಗೊಮ್ಮೆ ಕೈಗೊಳ್ಳುತ್ತದೆ.

ಕೆಡಿಪಿ ಸಭೆಗಳಲ್ಲಿ ಇಲಾಖೆಗಳ ಒಟ್ಟಾರೆ ವೆಚ್ಚದ ಪರಿಶೀಲನೆ, ಮುಂದುವರೆದ ಹಾಗೂ ಹೊಸ ಕಾರ್ಯಕ್ರಮಗಳ ಮಂಜೂರಾತಿಯ ಸ್ಥಿತಿ, ಪ್ರಮುಖ ಕಾರ್ಯಕ್ರಮಗಳಡಿ ಅಂದರೆ ಮಹತ್ವಾಕಾಂಕ್ಷೆಯ ಕಾರ್ಯಕ್ರಮಗಳು, ವಿಶೇಷ ಅಭಿವೃದ್ಧಿ ಕಾರ್ಯಕ್ರಮ, ಪರಿಶಿಷ್ಟ ಜಾತಿ ಉಪಯೋಜನೆ/ಗಿರಿಜನ ಉಪಯೋಜನೆ, ಬಾಹ್ಯಾನುಧಾರಿತ ಯೋಜನೆಗಳು ಮತ್ತು ಮೌಲ್ಯಮಾಪನ ಅಧ್ಯಯನಗಳ ಪ್ರಗತಿ ಕುರಿತಂತೆ ಪರಿಶೀಲಿಸಿಲಾಗುತ್ತದೆ.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ನಡೆಯುತ್ತಿರುವ ಮಹತ್ವದ ಕಾರ್ಯಕ್ರಮಗಳನ್ನು ಪರಿಶೀಲಿಸಲು ಹಾಗೂ ಅವುಗಳ ಅನುಷ್ಠಾನಕ್ಕೆ ಉಂಟಾಗುತ್ತಿರುವ ತೊಂದರೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ತುರ್ತು ಕ್ರಮ ಕೈಗೊಳ್ಳಲು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ನೇತೃತ್ವದಲ್ಲಿ ಸಭೆಗಳನ್ನು ನಡೆಸಲಾಗಿದ್ದು ಸದರೀ ಎಲ್ಲಾ ಸಭೆಗಳಿಗೆ ಸಮನ್ವಯ ನಿರ್ವಹಣಾಧಿಕಾರಿಯಾಗಿ / ಸಂಚಾಲಕರಾಗಿ ಯೋಜನಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಕಾರ್ಯನಿರ್ವಹಿಸುತ್ತಿದ್ದು ಹಾಗೂ ವಿಭಾಗವು ಈ ಎಲ್ಲಾ ಸಭೆಗಳ ನಿರ್ವಹಣೆಯನ್ನು ಕೈಗೊಳ್ಳಲಾಗುತ್ತದೆ.

ಆ. ಯೋಜನಾ ಕಾರ್ಯಕ್ರಮಗಳ ವಿವಿಧ ಹಂತ ಮಾಸಿಕ ಪರಿಶೀಲನೆ (ಎಂಎಂಆರ್):

ಈ ಪರಿಶೀಲನಾ ಪದ್ಧತಿಯನ್ವಯ ರಾಜ್ಯ ಮತ್ತು ಜಿಲ್ಲಾ ವಲಯದ ಯೋಜನಾ ಕಾರ್ಯಕ್ರಮಗಳ ಪ್ರಗತಿಯನ್ನು ಪ್ರತಿ ತಿಂಗಳು ಪರಿಶೀಲಿಸಲಾಗುತ್ತಿದೆ. ರಾಜ್ಯ ಮಟ್ಟದಲ್ಲಿ ಆಡಳಿತ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು ತಮಗೆ ಸಂಬಂಧಿಸಿದ ಇಲಾಖಾ ಮುಖ್ಯಸ್ಥರುಗಳ ಹಾಗೂ ಯೋಜನಾ ಮತ್ತು ಆರ್ಥಿಕ ಇಲಾಖೆಗಳ ನೋಡಲ್ ಅಧಿಕಾರಿಗಳ ಸಮಕ್ಷಮದಲ್ಲಿ ಯೋಜನಾ ಕಾರ್ಯಕ್ರಮಗಳ ಪ್ರಗತಿಯನ್ನು ಪರಿಶೀಲಿಸುವರು. ಈ ಸಮನ್ವಯ ಕಾರ್ಯವನ್ನು ಪೂರ್ಣವಾಗಿ ಈ ವಿಭಾಗವು ನಿರ್ವಹಿಸುತ್ತಿದೆ.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ವಲಯ ಯೋಜನೆಗಳ ಪ್ರಗತಿಯ ಮಾಸಿಕ ಪರಿಶೀಲನೆಯು ಜಿಲ್ಲಾ ಮಟ್ಟದ ಇಲಾಖಾ ಮುಖ್ಯಸ್ಥರುಗಳಿಂದ ಅವರಿಗೆ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿಗಳ ಉಪಸ್ಥಿತಿಯಲ್ಲಿ ನಡೆಯುವುದು.

ಈ ವಿಭಾಗವು ಎಂಪಿಕ್ ವರದಿಗಳಲ್ಲಿ ನೀಡಲಾಗಿರುವ ವಿವರಗಳನ್ನು ಆಧರಿಸಿ ಯೋಜನಾ ವೆಚ್ಚವನ್ನು ಆಡಳಿತ ಇಲಾಖಾವಾರು ಕ್ರೋಡೀಕರಿಸಿ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆಯುವ ಕೆಡಿಪಿ ಸಭೆಯಲ್ಲಿ ಪರಿಶೀಲನೆಗೆ ಒಳಪಡಿಸುತ್ತಿದೆ.

ಇ. ಕೇಂದ್ರ ಪುರಸ್ಕೃತ ಮತ್ತು ಕೇಂದ್ರ ವಲಯ ಯೋಜನೆಗಳು

ಈ ವಿಭಾಗವು ವಿವಿಧ ಇಲಾಖೆಗಳು ಅನುಷ್ಠಾನಗೊಳಿಸುವ ಕೇಂದ್ರ ಪುರಸ್ಕೃತ ಮತ್ತು ಕೇಂದ್ರ ವಲಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆಯನ್ನು ಪ್ರತಿ ತಿಂಗಳು (ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಒಳಗೊಂಡಂತೆ) ಕೈಗೊಂಡು ಅದರ ಫಲಿತಾಂಶಗಳನ್ನು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಕೆ.ಡಿ.ಪಿ. ಸಭೆಯ ಪರಿಶೀಲನೆಗೆ ಮಂಡಿಸಲಾಗುತ್ತದೆ.

ಈ. ಇತರೆ ಇಲಾಖೆಗಳಿಗೆ ನೋಡಲ್ ವಿಭಾಗ

ಸಮಾಜ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗಳಿಗೆ ನೋಡಲ್ ವಿಭಾಗವಾಗಿದ್ದು, ಸದರಿ ಇಲಾಖೆಗಳ ಯೋಜನಾ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಆಯವ್ಯಯ ಭಾಷಣ ಕಂಡಿಕೆಗಳ ಕಡತಗಳಿಗೆ ಅಭಿಪ್ರಾಯ ನೀಡುವುದು ಹಾಗೂ ಇಲಾಖೆಗಳ ಎಂ.ಎಂ.ಆರ್ ಸಭೆಗಳಲ್ಲಿ ಭಾಗವಹಿಸುವುದು.

ಉ. ಯೋಜನಾ ಇಲಾಖೆಯ ಎಂಎಂಆರ್ ಸಭೆ

ಯೋಜನಾ ಇಲಾಖೆಯ ಎಂ.ಎಂ.ಆರ್ ಸಭೆಗಳನ್ನು ವ್ಯವಸ್ಥೆಗೊಳಿಸುವುದು.